ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	553
ಸದಸ್ಯರ ಹೆಸರು :	ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ:	18.07.2019
ಉತ್ತರಿಸುವ ಸಚಿವರು :	ಗಣಿ ಮತ್ತು ಭೂವಿಜ್ಞಾನ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಎಷ್ಟು ಗಣಿಗಾರಿಕೆಗಳನ್ನು ಇಲಾಖೆಯಿಂದ ಪರವಾನಗಿ ಪಡೆದು ನಡೆಸಲಾಗುತ್ತಿದೆ; ಎಷ್ಟು ಗಣಿಗಾರಿಕೆಗಳು ಪರವಾನಗಿ ಪಡೆಯದೆ ಅಕ್ರಮವಾಗಿ ನಡೆಯುತ್ತಿವೆ (ತಾಲ್ಲೂಕುವಾರು ಮಾಲೀಕರ ಹೆಸರು ಮತ್ತು ವಿಳಾಸದೊಂದಿಗೆ ಸಂಪೂರ್ಣ ವಿವರವಾದ ಮಾಹಿತಿ ನೀಡುವುದು)	ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಪ್ರಸ್ತುತ 151 ಕಲ್ಲುಗಣಿ ಗುತ್ತಿಗೆಗಳು ಚಾಲ್ತಿಯಲ್ಲಿದ್ದು, ಕಲ್ಲುಗಣಿ ಗುತ್ತಿಗೆ ಮಾಲೀಕರ ಹೆಸರು, ವಿಳಾಸ ಇತ್ಯಾದಿ ವಿವರಗಳನ್ನು **ಅನುಬಂಧ-1**ರಲ್ಲಿ ನೀಡಲಾಗಿದೆ. 2018-19 ಮತ್ತು 2019-20ನೇ ಸಾಲಿನ ಇಲ್ಲಿಯವರೆವಿಗೆ ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಅನಧಿಕೃತ ಕಲ್ಲುಗಣಿಗಾರಿಕೆ ನಡೆಸುತ್ತಿದ್ದ ಒಟ್ಟು 08 ಪ್ರಕರಣಗಳನ್ನು ಪತ್ತೆಹಚ್ಚಲಾಗಿದ್ದು, ವಿವರಗಳನ್ನು **ಅನುಬಂಧ-2**ರಲ್ಲಿ ನೀಡಲಾಗಿದೆ.
ಆ)	ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಹೆಚ್ಚು ನಷ್ಟ ಉಂಟಾಗುತ್ತಿಲ್ಲವೇ: ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)	ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಅನಧಿಕೃತ ಕಲ್ಲುಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಕ್ರಮಕೈಗೊಳ್ಳಲು ಮಾನ್ಯ ನ್ಯಾಯಾಲಯಕ್ಕೆ ಖಾಸಗಿ ದೂರುಗಳನ್ನು ದಾಖಲಿಸಲಾಗಿರುತ್ತದೆ. ವಿವರಗಳನ್ನು **ಅನುಬಂಧ-2**ರಲ್ಲಿ ನೀಡಲಾಗಿದೆ.
ಇ)	ಗಣಿಗಾರಿಕೆಗಳು ನಿರಂತರವಾಗಿ ನಡೆಯುತ್ತಿರುವುದರಿಂದ ಈ ಪ್ರದೇಶದ ಸುತ್ತ-ಮುತ್ತ ವಾಸಿಸುವ ಗ್ರಾಮಸ್ಥರು ಮತ್ತು ರೈತರು ಅತೀವ ಸಂಕಷ್ಟ ಅನುಭವಿಸುತ್ತಿರುವುದರ ಬಗ್ಗೆ ಇಲಾಖೆಗೆ ದೂರುಗಳು ಬಂದಿಲ್ಲವೆ; ಎಲ್ಲಾ ದೂರುಗಳ ಪ್ರತಿ ನೀಡುವುದು; ಈ ದೂರುಗಳಿಗೆ ಕೈಗೊಂಡ ಕ್ರಮಗಳೇನು? (ವಿವರಗಳ ಮಾಹಿತಿಯನ್ನು ಒದಗಿಸುವುದು)	ಗಣಿಗಾರಿಕೆ ನಡೆಯುತ್ತಿರುವ ಸಂಬಂಧ ಗ್ರಾಮ ವಾಸಿಗಳಿಗೆ ಮತ್ತು ರೈತರ ಕೃಷಿ ಕಾರ್ಯಗಳಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ ದೂರುಗಳು ಸ್ವೀಕೃತವಾಗುತ್ತಿರುತ್ತವೆ. ಕಳೆದ ಒಂದು ವರ್ಷದಲ್ಲಿ ಸ್ವೀಕರಿಸಿರುವ ದೂರುಗಳ ವಿವರ ಹಾಗೂ ಸದರಿ ದೂರುಗಳ ಸಂಬಂಧ ಇಲಾಖೆಯಿಂದ ಕೈಗೊಂಡ ಕ್ರಮದ ವಿವರಗಳನ್ನು **ಅನುಬಂಧ-03**ರಲ್ಲಿ ನೀಡಲಾಗಿದೆ.

ಸಂಖ್ಯೆ: ಸಿಐ 159 ಎಂಎಂಎನ್ 2019

(ರಾಜಶೇಖರ ಬಿ. ಪಾಟೀಲ)
ಗಣಿ ಮತ್ತು ಭೂವಿಜ್ಞಾನ ಸಚಿವರು.